ಪ್ರ. ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು
<u>ಸಿ.ಸಿ. ನಂ.**1129/2023.**</u>

ದಿನಾಂಕ:**25-06-2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು

| | | |
|---|---|---|
| ಸಾಕ್ಷಿಯ ಹೆಸರು | ಹೆಚ್ ಆರ್ ಉಮೇಶ್ | ಚಾಸಾ-17<br>ಪ್ರಾಸಾ-6 |
| ತಂದೆಯ ಹೆಸರು | ರುದ್ರಯ್ಯ | |
| ವಯಸ್ಸು | 53 ವರ್ಷ | |
| ಉದ್ಯೋಗ | ಹೆಚ್ ಸಿ | |
| ವಾಸ | ಕಡೂರು | |

<u>ಮುಖ್ಯ ವಿಚಾರಣೆ: ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:</u>

ನಾನು 2019 ರಿಂದ ಇದುವರೆಗೂ ಕಡೂರು ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕ 16.09.2022 ರಂದು ಬೆಳಗ್ಗೆ 9.30 ಕ್ಕೆ ನಾನು ಪೊಲೀಸ್ ಠಾಣಾ ಪ್ರಭಾರದಲ್ಲಿ ಇದ್ದಾಗ ಚಾಸಾ 1 ರವರು ಹಾಜರುಪಡಿಸಿದ ಲಿಖಿತ ದೂರನ್ನು ಸ್ವೀಕರಿಸಿ ಪ್ರಕರಣದ ದಾಖಲಿಸಿರುತ್ತೇನೆ. ಸಾಕ್ಷಿಯು ಸದರಿ ದೂರನ್ನು ಮತ್ತು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದೂರಿನಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು ಹಾಗೂ ಸದರಿ ಪ್ರ.ವ.ವರದಿಯನ್ನು ನಿಪಿ 7 ಎಂದು ಸಾಕ್ಷಿಯ ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು. ನಂತರ ಮುಂದಿನ ತನಿಖೆಗೆಂದು ಪ್ರಕರಣದ ಕಡತವನ್ನು ಪಿ.ಎಸ್.ಐ-ಧನಂಜಯ್ ರವರಿಗೆ ಹಸ್ತಾಂತರಿಸಿರುತ್ತೇನೆ.

**(**ಈ ಹಂತದಲ್ಲಿ ಸಾಕ್ಷಿಯು ಅಭಿಯೊಜನೆಯ ಪ್ರಕರಣಕ್ಕೆ ಪ್ರತಿಕೂಲವಾಗಿ ಸಾಕ್ಷ್ಯ ನುಡಿದಿರುವುದರಿಂದ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿದಾರರನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ, ಪಾಟೀ ಸವಾಲನ್ನು ಮಾಡಲು ಮಾನ್ಯ ಸ ಸ ಅ ರವರು ಅನುಮತಿಯನ್ನು ಕೋರಿದ್ದು ಅನುಮತಿ ನೀಡಲಾಯಿತು**)**

<u>ಪಾಟೀ ಸವಾಲು: ಮಾನ್ಯ ಸ ಸ ಅ ರವರಿಂದ:</u>-

ಮುಂದಿನ ತನಿಖೆಗೆಂದು ಪ್ರಕರಣದ ಕಡತವನ್ನು ಚಾಸಾ 19 ರವರಿಗೆ ಹಸ್ತಾಂತರಿಸಿರುತ್ತೇನೆ ಎಂದರೆ ಸರಿ.

<u>ಪಾಟೀಸವಾಲುಃ ಆರೋಪಿ ಪರ ಶ್ರೀ.ಸಿ ಬಿ ವಕೀಲರಿಂದ</u>

ಘಟನೆಯು ದಿಃ15.09.2022 ರಂದು ನಡೆದಿದ್ದು ಎಷ್ಟು ಗಂಟೆಗೆ ಎಂದು ದೂರಿನಲ್ಲಿ ಬರೆದಿದ್ದು ನಾನು ವೈಯಕ್ತಿಕವಾಗಿ ತಿಳಿದುಕೊಂಡಿಲ್ಲ. ದೂರನ್ನು ಚಾಸಾ 1 ಕೊಟ್ಟಿರುತ್ತಾರೆ. ದೂರನ್ನು ಓದಿರುತ್ತೇನೆ. ದೂರುದಾರರು ನೀಡಿದ ಸುಳ್ಳು ದೂರಿಗೆ ಅನುಗುಣವಾಗಿ ಸುಳ್ಳು ಪ್ರ.ವ.ವರದಿ ದಾಖಲಿಸಿರುತ್ತೇನೆ ಎಂದರೆ ಸರಿಯಲ್ಲ.

<u>ಮರು ವಿಚಾರಣೆ ಃ ಇಲ್ಲ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ ಒ,

ಸಹಿ/-
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.